# ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

# KARNATAKA LEGISLATIVE ASSEMBLY RESEARCH AND REFERENCE BRANCH

## ಪತ್ರಿಕಾ ತುಣುಕುಗಳು
## PAPER CLIPPINGS

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER:

ದಿನಾಂಕ : DATE 4/2/2020

## ಹಿರಿಯ ರಾಜಕಾರಣಿ ಡಿ.ಮಂಜುನಾಥ್ ಇನ್ನಿಲ್ಲ

**ಚಿತ್ರದುರ್ಗ:** ಹಿರಿಯ ರಾಜಕಾರಣಿ, ಮಾಜಿ ಸಚಿವ ಡಿ.ಮಂಜುನಾಥ್



ಅನಾರೋಗ್ಯದಿಂದ ಬೆಂಗಳೂರಿನ ಅಪೋಲೋ ಆಸ್ಪತ್ರೆಯಲ್ಲಿ ಸೋಮವಾರ ಮಧ್ಯಾಹ್ನ 3.30ರ ಸುಮಾರಿಗೆ ಕೊನೆಯುಸಿರೆಳೆದಿದ್ದಾರೆ. ದೀರ್ಘ ಕಾಲದ ಅನಾರೋಗ್ಯ ಸಮಸ್ಯೆಯಿಂದ ಬಳಲುತ್ತಿದ್ದ ಅವರು ತೋಟದಮನೆಯಲ್ಲಿ ವಿಶ್ರಾಂತಿ ಪಡೆಯುತ್ತಿದ್ದರು. ಆರೋಗ್ಯ ಸಮಸ್ಯೆಯ ಕಾರಣದಿಂದಾಗಿ ರಾಜಕೀಯದಿಂದ ತಟಸ್ಥರಾಗಿದ್ದರು. ಇತ್ತೀಚೆಗೆ ಬೆಂಗಳೂರಿನ ಅಪೋಲೋ ಆಸ್ಪತ್ರೆಗೆ ದಾಖಲಾಗಿದ್ದರು. ಮೃತರಿಗೆ ಪತ್ನಿ, ಮೂವರು ಗಂಡು ಮಕ್ಕಳು ಇದ್ದಾರೆ.

ವಿವರ ಪುಟ → 10

## ಮಾಜಿ ಸಚಿವ ಡಿ.ಮಂಜುನಾಥ್ ನಿಧನ

**ಚಿತ್ರದುರ್ಗ:** ಹಿರಿಯ ರಾಜಕಾರಣಿ, ಮಾಜಿ ಸಚಿವ ಡಿ.ಮಂಜುನಾಥ್ ಅನಾರೋಗ್ಯದಿಂದ ಬೆಂಗಳೂರಿನ ಅಪೋಲೊ ಆಸ್ಪತ್ರೆಯಲ್ಲಿ ಸೋಮವಾರ ಮಧ್ಯಾಹ್ನ 3:30ರ ಸುಮಾರಿಗೆ ನಿಧರಾಗಿದ್ದಾರೆ.

ದೀರ್ಘ ಕಾಲದ ಅನಾರೋಗ್ಯ ಸಮಸ್ಯೆಯಿಂದ ಬಳಲುತ್ತಿದ್ದ ಅವರು ತೋಟದ ಮನೆಯಲ್ಲಿ ವಿಶ್ರಾಂತಿ ಪಡೆಯುತ್ತಿದ್ದರು. ಆರೋಗ್ಯ ಸಮಸ್ಯೆಯ ಕಾರಣದಿಂದಾಗಿ ರಾಜಕೀಯದಿಂದ ತಟಸ್ಥರಾಗಿದ್ದರು. ಇತ್ತೀಚೆಗೆ ಬೆಂಗಳೂರಿನ ಅಪ್ಪೊಲೋ ಆಸ್ಪತ್ರೆಗೆ ದಾಖಲಾಗಿದ್ದರು. ಮೃತರಿಗೆ ಪತ್ನಿ, ಮೂವರು ಗಂಡು ಮಕ್ಕಳು ಇದ್ದಾರೆ.

ಮಾಜಿ ಸಚಿವ ಡಿ.ಮಂಜುನಾಥ್ 26 ಆಗಸ್ಟ್ 1928 ರಲ್ಲಿ ಚಿತ್ರದುರ್ಗ ಜಿಲ್ಲೆಯ ಚಳ್ಳಕೆರೆ ತಾಲೂಕಿನ ಜಾಜೂರ್ ಗ್ರಾಮದಲ್ಲಿ ಜನಿಸಿದ್ದರು. ಬಿಎಸ್ಸಿ, ಬಿಎಲ್ ಪದವಿ ಪಡೆದಿದ್ದರು. 1959 ರಲ್ಲಿ ತಾಲೂಕು ಮಂಡಳಿ ಚುನಾವಣೆಯಲ್ಲಿ ಸ್ಪರ್ಧಿಸಿ ಮೈಸೂರು ರಾಜ್ಯದ ಯುವ ರೈತರ ಸಂಘದ ಸದಸ್ಯರಾದರು ಮತ್ತು ಹಲವಾರು ವರ್ಷಗಳ ಕಾಲ ಕೆಲಸ ಮಾಡಿದರು. ಬಳಿಕ ಚಿತ್ರದುರ್ಗದಲ್ಲಿ ಹಲವಾರು ಹಾಸ್ಟೆಲ್ ಸಮಿತಿಯ ಸದಸ್ಯರಾಗಿದ್ದರು. ನಾಲ್ಕನೇ ಸಾರ್ವತ್ರಿಕ ಚುನಾವಣೆಯ ಸಮಯದಲ್ಲಿ (1967) ಹಿರಿಯೂರು ಕ್ಷೇತ್ರದಿಂದ ವಿಧಾನಸಭೆಗೆ ಆಯ್ಕೆಯಾಗಿ ವಿಧಾನಸಭೆಯ ಉಪ ಸ್ಪೀಕರ್ ಆಗಿ ನೇಮಕವಾಗಿ ಕಾರ್ಯನಿರ್ವಹಿಸಿದ್ದರು. ಜಿಲ್ಲಾ ಕಾಂಗ್ರೆಸ್ ಸಮಿತಿಯ ಪ್ರಧಾನ ಕಾರ್ಯದರ್ಶಿಯಾಗಿದ್ದ ಅವರು ಮೈಸೂರು ವಿಶ್ವವಿದ್ಯಾಲಯ ಸಿಂಡಿಕೇಟ್ ಸದಸ್ಯರಾಗಿ ಕೆಲಸ ಮಾಡಿದ್ದರು.

ಬಳಿಕ 1977 ರಲ್ಲಿ ಜನತಾ ಪಕ್ಷಕ್ಕೆ ಸೇರುವ ಮೂಲಕ ಚಿತ್ರದುರ್ಗ ಜಿಲ್ಲೆಯ ಜಿಲ್ಲಾ ಜನತಾ ಪಕ್ಷದ ಅಧ್ಯಕ್ಷರಾಗಿ 3 ವರ್ಷ ಕೆಲಸ ಮಾಡಿದ್ದರು. ಮಾರ್ಚ್, 1983 ರಲ್ಲಿ ಶಾಸಕಾಂಗ ಪರಿಷತ್ತಿನ ಸದಸ್ಯರಾಗಿ ನಾಮ ನಿರ್ದೇಶನಗೊಂಡ ಅವರು 1984 ರ ಆಗಸ್ಟ್ 18 ರಿಂದ ಯೋಜನಾ, ಸಂಸ್ಥೆಗಳ ಸಚಿವರಾಗಿ ನೇಮಕಗೊಂಡರು.

1985 ರ ಮಾರ್ಚ್‌ನಲ್ಲಿ ಮತ್ತೆ ಕಾರ್ಮಿಕ ಸಚಿವರಾಗಿ ನೇಮಕಗೊಂಡರು. ಜುಲೈ 18,1986 ರಿಂದ 1987 ರ ಆಗಸ್ಟ್ 26 ರವರೆಗೆ ಶಿಕ್ಷಣ ಸಚಿವರಾಗಿ ಕಾರ್ಯನಿರ್ವಹಿಸಿದ್ದರು. ಕರ್ನಾಟಕ ಪ್ರದೇಶ ಜನತಾ ಪಕ್ಷ ಅಧ್ಯಕ್ಷರಾದ ಮೊದಲ ಪರಿಶಿಷ್ಟ ಜಾತಿಯ ವ್ಯಕ್ತಿ ಅಧ್ಯಕ್ಷರಾದ ಹೆಗ್ಗಳಿಕೆಗೆ ಪಾತ್ರರಾಗಿದ್ದರು. ಸೆಪ್ಟೆಂಬರ್ 2,1987 ರಂದು ಕರ್ನಾಟಕ ವಿಧಾನ ಪರಿಷತ್ತಿನ ಅಧ್ಯಕ್ಷರಾಗಿ ಸರ್ವಾನುಮತದಿಂದ ಆಯ್ಕೆಯಾಗಿದ್ದರು.